ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ ದಿನಾಂಕ : DATE : 10/07/2019

# ರಾಜೀನಾಮೆ ನೀಡಿದ ಬೆನ್ನಲ್ಲೇ ಬೇಗ್‌ಗೆ ಎಸ್‌ಐಟಿ ನೋಟಿಸ್

10/7/19.

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಐಎಂಎ ಕಂಪನಿಯ ಬಹುಕೋಟಿ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹಾಗೂ ಶಿವಾಜಿನಗರ ಕಾಂಗ್ರೆಸ್ ಶಾಸಕ ರೋಷನ್ ಬೇಗ್ ಅವರಿಗೆ ವಿಶೇಷ ತನಿಖಾ ದಳ(ಎಸ್‌ಐಟಿ)ದ ಅಧಿಕಾರಿಗಳು ನೋಟಿಸ್ ಜಾರಿಗೊಳಿಸಿದ್ದಾರೆ.



ವಂಚನೆ ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಧಿಕಾರಿಗಳು ಜು.11 ರಂದು ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿಗೊಳಿಸಿದ್ದು ರೋಷನ್‌ಬೇಗ್ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ ಬೆನ್ನಲ್ಲೇ ನೋಟಿಸ್ ಜಾರಿಗೊಳಿಸಿರುವುದು ಸರಕಾರ ಐಎಂಎ ಅಸ್ತ್ರ ಪ್ರಯೋಗಿಸಿತೇ ಎಂಬ ಪ್ರಶ್ನೆಯೊಂದು ರಾಜಕೀಯ ವಲಯದಲ್ಲಿ ಕೇಳಿ ಬಂದಿದೆ.

ಐಎಂಎ ವಂಚನೆ ಪ್ರಕರಣದಲ್ಲಿ ಈ ಹಿಂದೆ ಸಚಿವ ಜಮೀರ್ ಅಹ್ಮದ್ ಅವರಿಗೂ. ಎಸ್‌ಐಟಿ ನೋಟಿಸ್ ನೀಡಿದ್ದು, ನೋಟಿಸ್ ಪಡೆದ ಜಮೀರ್ ಅಹ್ಮದ್ ವಿಚಾರಣೆಗೆ ಹಾಜರಾಗಿದ್ದರು. ಐಎಂಎ ಸಮೂಹ ಸಂಸ್ಥೆಯ ಮುಖ್ಯಸ್ಥ ಮನ್ಸೂರ್‌ಖಾನ್ ಪರಾರಿಯಾಗುವ ಮುನ್ನ ಬಿಡುಗಡೆ ಮಾಡಿದ್ದ ವಿಡಿಯೋದಲ್ಲಿ ರೋಷನ್‌ಬೇಗ್ ಅವರಿಂದ ತನಗೆ ಅನ್ಯಾಯವಾಗಿರುವುದಾಗಿ ತಿಳಿಸಿದ್ದ. ನನ್ನಿಂದ ಕೋಟಿಗಟ್ಟಲೆ ಹಣ ಪಡೆದಿದ್ದಾರೆ ಎಂದು ಹೇಳಿಕೆ ನೀಡಿದ್ದನು.

ಈ ಸಂಬಂಧ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಧಿಕಾರಿಗಳು ಮನ್ಸೂರ್ ಖಾನ್ ವಿಡಿಯೋದಲ್ಲಿನ ಹೇಳಿಕೆ ಆಧರಿಸಿ ಉಪ ವಿಭಾಗಾಧಿಕಾರಿ ಎಲ್‌ಸಿ ನಾಗರಾಜ್ ಹಾಗೂ ನಗರ ಜಿಲ್ಲಾಧಿಕಾರಿ ವಿಜಯ್‌ಶಂಕರ್ ಅವರನ್ನು ಬಂಧಿಸಿ ವಿಚಾರಣೆ ನಡೆಸಿದ ಬೆನ್ನಲ್ಲೇ ರೋಷನ್ ಬೇಗ್ ಅವರಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿಗೊಳಿಸಿದ್ದಾರೆ.